# Akashvani : Bangalore
# Regional Bulletin In Kannada
# 26.03.2026 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

26.03.2026 / 18.40 hrs

***************

ಮುಖ್ಯಾಂಶಗಳು

೧. ಒಂದನೇ ತರಗತಿ ಪ್ರವೇಶಕ್ಕೆ ಮಕ್ಕಳ ವಯೋಮಿತಿಯಲ್ಲಿ ೬೦ ದಿನ ವಿನಾಯಿತಿ ನೀಡಿದ ಸರ್ಕಾರ

೨. ಸಮಾಜಕಲ್ಯಾಣ ಸೇರಿದಂತೆ ಯಾವ ಇಲಾಖೆಗೂ ಅನುದಾನ ಕಡಿಮೆ ಮಾಡಿಲ್ಲ - ಮೇಲ್ಮನೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥನೆ

೩. ಬೆಂಗಳೂರಿನ ಕುಡಿಯುವ ನೀರಿನ ಸಮಸ್ಯೆಗೆ ಐದು ವರ್ಷಗಳಲ್ಲಿ ಪರಿಹಾರ - ವಿಧಾನಸಭೆಯಲ್ಲಿ ಉಪಮುಖ್ಯಮಂತ್ರಿ ಸ್ಪಷ್ಟನೆ

೪. ಸದನದಲ್ಲಿ ಐಪಿಎಲ್ ಟಿಕೆಟ್ ಬಗ್ಗೆ ಗಂಭೀರ ಚರ್ಚೆ; ಟಿಕೆಟ್ ಕೊಡಿಸುವಂತೆ ಸರ್ಕಾರಕ್ಕೆ ಮನವಿ ಮಾಡಿದ ಶಾಸಕರು

೫. ವಿಧಾನಸಭಾ ಉಪಚುನಾವಣೆ; ಬಾಗಲಕೋಟೆಯಲ್ಲಿ ೯, ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ೨೫ ಮಂದಿ ಕಣದಲ್ಲಿ

***************

ಒಂದನೇ ತರಗತಿ ದಾಖಲಾತಿಗೆ ಆರು ವರ್ಷ ತುಂಬಿರಬೇಕು ಎಂಬ ಕಡ್ಡಾಯ ನಿಯಮದಲ್ಲಿ ಸರ್ಕಾರ ಈ ವರ್ಷವೂ ೬೦ ದಿನಗಳ ವಿನಾಯಿತಿ ನೀಡಿ, ಮಹತ್ವದ ತೀರ್ಮಾನ ಕೈಗೊಂಡಿದೆ. ವಿಧಾನಸಭೆಯಲ್ಲಿಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಈ ಘೋಷಣೆ ಮಾಡಿದ್ದಾರೆ.

ಈ ನಿರ್ಧಾರದಿಂದ ಐದು ವರ್ಷ ಹತ್ತು ತಿಂಗಳು ಅಥವಾ ಅದಕ್ಕಿಂತ ಹೆಚ್ಚಿರುವ ಮಕ್ಕಳು ಈ ವರ್ಷ ಒಂದನೇ ತರಗತಿಗೆ ದಾಖಲಾಗಬಹುದು. ಈ ಸಡಿಲಿಕೆ ಎಲ್‌ಕೆಜಿ, ಯುಕೆಜಿ, ಒಂದನೇ ತರಗತಿಗೆ ಅನ್ವಯವಾಗಲಿದೆ.

ಪ್ರತಿ ಬಾರಿಯೂ ಈ ಸಮಸ್ಯೆ ಎದುರಾಗುತ್ತಿರುವ ಹಿನ್ನೆಲೆಯಲ್ಲಿ ಹೊಸದಾಗಿ ಕಾನೂನು ತಂದು, ಶಾಶ್ವತ ಪರಿಹಾರ ಕಂಡುಕೊಳ್ಳಲು ಸರ್ಕಾರ ನಿರ್ಧರಿಸಿದೆ. ಮುಂದಿನ ಅಧಿವೇಶನದಲ್ಲಿ ಈ ಸಂಬಂಧ ಮಸೂದೆ ಮಂಡನೆ ಮಾಡಲಾಗುವುದು ಎಂದು ಸಚಿವರು ತಿಳಿಸಿದ್ದಾರೆ.

***************

ವಿಧಾನ ಪರಿಷತ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ೨೦೨೬-೨೭ರಲ್ಲಿ ಮಂಡಿಸಿರುವ ರಾಜ್ಯ ಆಯವ್ಯಯವನ್ನು ಸಮರ್ಥಿಸಿಕೊಂಡಿದ್ದಾರೆ.

ಸರ್ಕಾರ ನೀರಾವರಿ, ಸಮಾಜಕಲ್ಯಾಣ, ಆರೋಗ್ಯ ಸೇರಿದಂತೆ ಯಾವ ಇಲಾಖೆಗಳಿಗೂ ಅನುದಾನ ಕಡಿಮೆ ಮಾಡಿಲ್ಲ ಎಂದು ತಿಳಿಸಿದ್ದಾರೆ.

ಕೃಷ್ಣಾ ಮೇಲ್ದಂಡೆ ಯೋಜನೆಗೆ ಕೇಂದ್ರ ಸರ್ಕಾರ ಇನ್ನೂ ಅಧಿಸೂಚನೆ ಹೊರಡಿಸಿಲ್ಲ. ಅಧಿಸೂಚನೆ ಹೊರಡಿಸಲು ಬಿಜೆಪಿ ಸಂಸದರು ಪ್ರಯತ್ನಿಸಬೇಕು. ಭೂಸ್ವಾಧೀನಕ್ಕೆ ಮೂರು ಸಾವಿರ ಕೋಟಿ ರೂಪಾಯಿ ಮೀಸಲಿಡಲಾಗಿದೆ ಎಂದು ಹೇಳಿದ್ದಾರೆ.

ಸರ್ಕಾರ ಸಾಮಾಜಿಕ ನ್ಯಾಯದ ಪರವಾಗಿದ್ದು, ಸಮಾಜದ ಕಟ್ಟಕಡೆಯ ವ್ಯಕ್ತಿಗೆ ಸ್ವಾವಲಂಬಿ ಬದುಕು ನಡೆಸಲು ನೆರವಾಗುತ್ತಿದೆ. ಡಾ. ಬಿ.ಆರ್. ಅಂಬೇಡ್ಕರ್ ಅವರ ಸಾಮಾಜಿಕ ನ್ಯಾಯದ ಪರವಾಗಿ ಬಜೆಟ್ ಮಂಡಿಸಲಾಗಿದೆ ಎಂದು ತಿಳಿಸಿದ್ದಾರೆ.

ಮುಖ್ಯಮಂತ್ರಿ ನೀಡಿದ ಉತ್ತರದ ಬಳಿಕ ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ ೨೦೨೬ನೇ ಸಾಲಿನ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಮಂಡಿಸಲಾಯಿತು.

***************

ಬೆಂಗಳೂರಿನಲ್ಲಿ ಕುಡಿಯುವ ನೀರಿನ ಸಮಸ್ಯೆಗೆ ಮುಂದಿನ ಐದು ವರ್ಷಗಳಲ್ಲಿ ಪರಿಹಾರ ಸಿಗಲಿದೆ ಎಂದು ಸರ್ಕಾರ ವಿಧಾನಸಭೆಗೆ ತಿಳಿಸಿದೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾತನಾಡಿ, ಬೆಂಗಳೂರಿನಲ್ಲಿ ತಲೆ ಎತ್ತಿರುವ ಟ್ಯಾಂಕರ್ ಮಾಫಿಯಾಗೆ ಕಡಿವಾಣ ಹಾಕಲಾಗುವುದು ಎಂದು ತಿಳಿಸಿದ್ದಾರೆ.

ಈ ನಡುವೆ, ಡಿ.ಕೆ. ಶಿವಕುಮಾರ್ ಹಾಗೂ ಶಾಸಕ ಮುನಿರತ್ನ ನಡುವೆ ಏರುಧ್ವನಿಯಲ್ಲಿ ಮಾತಿನ ಚಕಮಕಿ ನಡೆದು, ಸದನದಲ್ಲಿ ಗದ್ದಲದ ವಾತಾವರಣ ನಿರ್ಮಾಣವಾಯಿತು. ಸಭಾಧ್ಯಕ್ಷ ಯು.ಟಿ.

ಖಾದರ್ ಮಧ್ಯಪ್ರವೇಶಿಸಿ ಬೆಂಗಳೂರು ಅಭಿವೃದ್ಧಿ ಕುರಿತಂತೆ ಪ್ರಸ್ತಾಪವಾದ ವಿಚಾರಗಳನ್ನು ಹೊರತುಪಡಿಸಿ, ಉಳಿದೆಲ್ಲಾ ವಿಚಾರಗಳನ್ನು ಕಡತದಿಂದ ತೆಗೆಯಲು ಸೂಚಿಸಿದರು.

ಮತ್ತೆ ಉಭಯ ಪಕ್ಷಗಳ ನಡುವೆ ಗದ್ದಲ ಉಂಟಾಗಿ ಸದನದಲ್ಲಿ ಆಡಳಿತ ಪಕ್ಷದ ಸದಸ್ಯರೇ ಧರಣಿ ನಡೆಸಿದರು. ಸಭಾಧ್ಯಕ್ಷ ಯು.ಟಿ. ಖಾದರ್ ಮನವಿಗೆ ಸ್ಪಂದಿಸಿದ ಬಳಿಕ ಶಾಸಕರು ಸ್ವಸ್ಥಾನಕ್ಕೆ ಮರಳಿದರು. ಬಳಿಕ ಸಭಾಧ್ಯಕ್ಷರು ಮುಂದಿನ ಕಾರ್ಯಕಲಾಪ ಕೈಗೆತ್ತಿಕೊಂಡರು.

***************

ವಿಧಾನಸಭೆಯಲ್ಲಿಂದು ಐಪಿಎಲ್ ಕ್ರಿಕೆಟ್ ಬಗ್ಗೆ ಚರ್ಚೆ ನಡೆದಿದ್ದು ವಿಶೇಷವಾಗಿತ್ತು. ಆಡಳಿತಾರೂಢ ಹಾಗೂ ವಿಪಕ್ಷ ಶಾಸಕರು ಐಪಿಎಲ್ ಟಿಕೆಟ್‌ಗೆ ಬೇಡಿಕೆ ಇಟ್ಟಿದ್ದು, ಶಾಸಕರಿಗೆ ಕನಿಷ್ಠ ೪ ರಿಂದ ೫ ಟಿಕೆಟ್ ಕೊಡಿಸಿ ಎಂದು ಪಕ್ಷಾತೀತವಾಗಿ ಸಭಾಧ್ಯಕ್ಷ ಯು.ಟಿ. ಖಾದರ್ ಮುಂದೆ ಬೇಡಿಕೆ ಇಟ್ಟಿದ್ದಾರೆ.

ಈ ಕುರಿತಂತೆ ಪ್ರತಿಕ್ರಿಯಿಸಿದಂತೆ ಸಭಾಧ್ಯಕ್ಷ ಯು.ಟಿ. ಖಾದರ್, ಶಾಸಕರು ಐಪಿಎಲ್ ಟಿಕೆಟ್ ಬಗ್ಗೆ ಗಂಭೀರ ವಿಚಾರ ಎತ್ತಿದ್ದಾರೆ. ಸರ್ಕಾರ ಕೆಎಸ್‌ಸಿಎ ಅವರನ್ನು ಕರೆಸಿ, ಒಂದು ತೀರ್ಮಾನ ತೆಗೆದುಕೊಳ್ಳಬೇಕು. ಶಾಸಕರಿಗೆ ಕನಿಷ್ಠ ೪ ವಿಐಪಿ ಟಿಕೆಟ್ ಕೊಡುವ ವ್ಯವಸ್ಥೆಯಾಗಲಿ ಎಂದು ಸಲಹೆ ನೀಡಿದರು.

***************

ವನ್ಯಜೀವಿಗಳ ದಾಳಿಯಿಂದ ಮೃತಪಟ್ಟವರ ಕುಟುಂಬದ ವಾರಸುದಾರರಿಗೆ ಸರ್ಕಾರಿ ನೌಕರಿ ನೀಡಲು ಸರ್ಕಾರಿ ಆದೇಶದನ್ವಯ ಅವಕಾಶ ಇರುವುದಿಲ್ಲ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ವಿಧಾನಸಭೆಯಲ್ಲಿ ಸ್ಪಷ್ಟಪಡಿಸಿದ್ದಾರೆ.

ಪ್ರಶ್ನೋತ್ತರ ಕಲಾಪದಲ್ಲಿ ಶೃಂಗೇರಿ ಶಾಸಕ ರಾಜೇಗೌಡರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಮಾನವ-ವನ್ಯಜೀವಿ ಸಂಘರ್ಷದಲ್ಲಿ ಮೃತಪಟ್ಟವರ ಕುಟುಂಬಕ್ಕೆ ಪರಿಹಾರ ಮತ್ತು ಮಾಸಾಶನ ನೀಡಲಾಗುತ್ತಿದೆ. ಈ ಹಿಂದೆ ಇದ್ದ ೧೫ ಲಕ್ಷ ರೂಪಾಯಿ ಪರಿಹಾರದ ಮೊತ್ತವನ್ನು ೨೦ ಲಕ್ಷ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ. ಪರಿಹಾರದ ಜೊತೆಗೆ ೫ ವರ್ಷಗಳ ಕಾಲ ಮಾಸಿಕ ೪ ಸಾವಿರ ರೂಪಾಯಿ ಮಾಸಾಶನವನ್ನು ಮೃತರ ಕುಟುಂಬದ ಸದಸ್ಯರಿಗೆ ನೀಡಲಾಗುತ್ತಿದೆ ಎಂದು ಸದನಕ್ಕೆ ಮಾಹಿತಿ ನೀಡಿದರು.

ಹೊರಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕರ್ತವ್ಯನಿರತ ಸಿಬ್ಬಂದಿ ಮೃತಪಟ್ಟಾಗ ಈ ಹಿಂದೆ ೩೦ ಲಕ್ಷ ಅನುದಾನ ನೀಡಲಾಗುತ್ತಿತ್ತು. ಈಗ ಆ ಮೊತ್ತವನ್ನು ೫೦ ಲಕ್ಷ ರೂಪಾಯಿಗಳಿಗೆ ಹೆಚ್ಚಳ ಮಾಡಲಾಗಿದೆ ಎಂದು ತಿಳಿಸಿದರು.

***************

ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ರಾಜಕೀಯ ಪಕ್ಷಗಳ ಚುನಾವಣಾ ಪ್ರಚಾರ ಬಿರುಸುಗೊಂಡಿದೆ. ಏಪ್ರಿಲ್ ೯ ರಂದು ಮತದಾನ ನಡೆಯಲಿದ್ದು, ಮೇ ೪ಕ್ಕೆ ಮತ ಎಣಿಕೆ ನಡೆಯಲಿದೆ. ಇಂದು ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿತ್ತು.

ಬಾಗಲಕೋಟೆಯಲ್ಲಿ ೯, ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ೨೫ ಮಂದಿ ಕಣದಲ್ಲಿ ಉಳಿದಿದ್ದಾರೆ. ಬಾಗಲಕೋಟೆಯಲ್ಲಿ ಪ್ರಮುಖವಾಗಿ ಬಿಜೆಪಿಯಿಂದ ವೀರಣ್ಣ ಚರಂತಿಮಠ, ಕಾಂಗ್ರೆಸ್‌ನಿಂದ ಉಮೇಶ್ ಮೇಟಿ ಕಣದಲ್ಲಿದ್ದಾರೆ.

ದಾವಣಗೆರೆ ದಕ್ಷಿಣದಲ್ಲಿ ಕಾಂಗ್ರೆಸ್‌ನಿಂದ ಸಮರ್ಥ್ ಶ್ಯಾಮನೂರ್, ಬಿಜೆಪಿಯಿಂದ ಶ್ರೀನಿವಾಸ ದಾಸ ಕರಿಯಪ್ಪ ಹಾಗೂ ೨೫ ಮಂದಿ ಕಣದಲ್ಲಿದ್ದಾರೆ. ಉಮೇದುವಾರಿಕೆ ಸಲ್ಲಿಸಿದ ೩೯ ಮಂದಿ ಪೈಕಿ, ೧೧ ಅಭ್ಯರ್ಥಿಗಳು ನಾಮಪತ್ರ ವಾಪಸ್ ಪಡೆದಿದ್ದಾರೆ.

***************

ರಾಜ್ಯಾದ್ಯಂತ ಎಸ್‌ಎಸ್‌ಎಲ್‌ಸಿ ಪರೀಕ್ಷೆ ನಡೆಯುತ್ತಿದ್ದು, ಇದೇ ೩೦ರಂದು ನಡೆಯಬೇಕಿದ್ದ ಹಿಂದಿ ಪರೀಕ್ಷೆಯನ್ನು ಮುಂದೂಡಲಾಗಿದೆ. ಮಾರ್ಚ್ ೩೦ ರಂದು ಮಹಾವೀರ ಜಯಂತಿ ಹಿನ್ನೆಲೆಯಲ್ಲಿ ೩೧ಕ್ಕೆ ಹಿಂದಿ ಪರೀಕ್ಷೆಯನ್ನು ನಿಗದಿಪಡಿಸಲಾಗಿದೆ ಎಂದು ಕರ್ನಾಟಕ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯಿಂದ ಸುತ್ತೋಲೆ ಹೊರಡಿಸಲಾಗಿದೆ.

೨೦೨೬ನೇ ಸಾಲಿನ ಸಾರ್ವತ್ರಿಕ ರಜಾ ದಿನಗಳ ಪಟ್ಟಿಯ ಅಧಿಸೂಚನೆ ೧ ಮತ್ತು ೨ ರ ಕೋಷ್ಟಕದ ಕ್ರಮ ಸಂಖ್ಯೆ ೫ರಲ್ಲಿ ಮಹಾವೀರ ಜಯಂತಿ ಪ್ರಯುಕ್ತ ಘೋಷಿಸಲಾಗಿರುವ ಸಾರ್ವತ್ರಿಕ ರಜಾ ದಿನವನ್ನು ಮಂಗಳವಾರಕ್ಕೆ ಬದಲಾಗಿ ಸೋಮವಾರ ಎಂದು ಮಾರ್ಪಡಿಸಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಆದೇಶಿಸಿದೆ.

***************

ಧಾರವಾಡ ಜಿಲ್ಲೆಯಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಯಾವುದೇ ಕೊರತೆಯಿಲ್ಲ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ವಿನೋದಕುಮಾರ ಹೆಗ್ಗಳಗಿ ತಿಳಿಸಿದ್ದಾರೆ.

ಹುಬ್ಬಳ್ಳಿಯ ಕಾಟನ್ ಮಾರ್ಕೆಟ್ ಬಳಿಯ ಇಂಡಿಯನ್ ಆಯಿಲ್ ಪೆಟ್ರೋಲ್ ಬಂಕ್ ಗೆ ಭೇಟಿ ನೀಡಿ, ಪರಿಶೀಲಿಸಿದ ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದ ಅವರು, ಜಿಲ್ಲೆಯಲ್ಲಿ ಇನ್ನೂ ಐದು ದಿನಗಳವರೆಗೆ ಲಭ್ಯವಾಗುವಷ್ಟು ಇಂಧನ ಸಂಗ್ರಹವಿದೆ ಎಂದು ಹೇಳಿದ್ದಾರೆ.

***************

ರಾಜ್ಯದ ಕರಾವಳಿ ಮತ್ತು ಮಲೆನಾಡು ಭಾಗವು ಬಹುಭಾಷೆ ಮತ್ತು ಬಹುಸಂಸ್ಕಂತಿ ಒಳಗೊಂಡಿರುವ ಪ್ರದೇಶವಾಗಿದೆ. ನಾಡಿನ ಭಾಷೆ ಜೊತೆಗೆ ಅರೆಭಾಷೆ ಸೇರಿದಂತೆ ಸಣ್ಣ ಸಣ್ಣ ಭಾಷೆಗಳನ್ನು ಉಳಿಸಿ, ಬೆಳೆಸುವಂತಾಗಬೇಕು ಎಂದು ಕೊಡಗು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಅಶೋಕ್ ಸಂಗಪ್ಪ ಆಲೂರ ಕರೆ ನೀಡಿದ್ದಾರೆ.

ಕರ್ನಾಟಕ ಅರೆಭಾಷೆ ಸಂಸ್ಕಂತಿ ಮತ್ತು ಸಾಹಿತ್ಯ ಅಕಾಡೆಮಿ  ವತಿಯಿಂದ  ನಡೆದ ರಾಜ್ಯ ಮಟ್ಟದ ಅರೆಭಾಷೆ ವಿಚಾರ ಸಂಕಿರಣ ಮತ್ತು ಪದ ಕಟ್ಟುವ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕೊಡಗು, ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ, ಜಿಲ್ಲೆಗಳಲ್ಲಿ ಬಹುಭಾಷೆ ಮತ್ತು ಬಹುಸಂಸ್ಕಂತಿ ಇರುವುದನ್ನು ಕಾಣಬಹುದಾಗಿದೆ. ಕನ್ನಡ ಭಾಷೆಯ ಜೊತೆಗೆ ಸಣ್ಣ ಸಣ್ಣ ಸ್ಥಳೀಯ ಭಾಷೆಗಳನ್ನು ಉಳಿಸಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ.

***************

ಸಂಕ್ಷಿಪ್ತ ಸುದ್ದಿ

೧.	ಯಾದಗಿರಿ ಜಿಲ್ಲೆಯ ಶಹಾಪುರ ನಗರದಲ್ಲಿನ ನಿರಾಶ್ರಿತರಿಗೆ ನಿವೇಶನ ಒದಗಿಸುವ ಉದ್ದೇಶದಿಂದ ರೇಷ್ಮೆ ಇಲಾಖೆಯ ವ್ಯಾಪ್ತಿಯ ೫೦ ಎಕರೆ ಜಮೀನನ್ನು ರಾಜೀವ್ ಗಾಂಧಿ ವಸತಿ ಯೋಜನೆ ಅಡಿಯಲ್ಲಿ ಪಡೆಯಲು ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ.

೨.	ಮಲೆ ಮಹದೇಶ್ವರ ಬೆಟ್ಟದಲ್ಲಿ ಬೇಡಗಂಪಣ ಸಮುದಾಯದ ವತಿಯಿಂದ ಇಂದು ಬೇಡರ ಕಣ್ಣಪ್ಪ ಜಯಂತಿ ಆಚರಿಸಲಾಯಿತು. ಮಲೆ ಮಹದೇಶ್ವರನಿಗೆ ರುದ್ರಾಭಿಷೇಕ, ಹುಲಿ ವಾಹನ, ರುದ್ರಾಕ್ಷಿ ಮಂಟಪ ವಾಹನ ಉತ್ಸವಗಳನ್ನು ಸಾಲೂರು ಮಠದ ಪೀಠಾಧಿಪತಿ ಶಾಂತಾ ಮಲ್ಲಿಕಾರ್ಜುನ ಸ್ವಾಮೀಜಿ ನೇತೃತ್ವದಲ್ಲಿ ನಡೆಸಲಾಯಿತು.

೩.	ತಂಬಾಕು ಉತ್ಪನ್ನಗಳ ಬಳಕೆಯಿಂದಾಗುವ ದುಷ್ಪರಿಣಾಮಗಳ ಕುರಿತು ಶಾಲಾ ಕಾಲೇಜುಗಳಲ್ಲಿ ಹೆಚ್ಚು ಜಾಗೃತಿ ಕಾರ್ಯಕ್ರಮಗಳನ್ನು ಏರ್ಪಡಿಸುವ ಮೂಲಕ ವಿದ್ಯಾರ್ಥಿಗಳು, ಯುವ ಜನರಲ್ಲಿ ವ್ಯಾಪಕವಾಗಿ ಜಾಗೃತಿ ಮೂಡಿಸುವಂತೆ ರಾಮನಗರ ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

೪.	ಕೋಲಾರದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಸಮಗ್ರ ಯೋಜನಾ ವರದಿ ತಯಾರಿಸಲು ಲೋಕೋಪಯೋಗಿ ಇಲಾಖೆಗೆ ರಾಜ್ಯ ಸರ್ಕಾರ ಸೂಚನೆ ನೀಡಿದೆ ಎಂದು ಶಾಸಕ ಕೊತ್ತೂರು ಮಂಜುನಾಥ್ ತಿಳಿಸಿದ್ದಾರೆ.

೫.	ಗದಗ ಜಿಲ್ಲಾಡಳಿತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಹಾಗೂ ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ವಿಭಾಗದ ವತಿಯಿಂದ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅಧ್ಯಕ್ಷತೆಯಲ್ಲಿ ಮಿಷನ್ ಏಡ್ಸ್ ಸುರಕ್ಷಾ ಕಾರ್ಯಕ್ರಮದ ಪ್ರಗತಿ ಪರಿಶೀಲನಾ ಸಭೆ ಜರುಗಿತು.

೬.	ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಕರ್ನಾಟಕ ನಾಟಕ ಅಕಾಡೆಮಿ, ಶ್ರವಣ ಸಂಸ್ಕೃತಿ ಟ್ರಸ್ಟ್ ವತಿಯಿಂದ ವಿಶ್ವ ರಂಗಭೂಮಿ ದಿನಾಚರಣೆ ಅಂಗವಾಗಿ ಕುವೆಂಪು ಅವರ ಶೂದ್ರ ತಪಸ್ವಿ ನಾಟಕ ಪ್ರದರ್ಶನ ಹಮ್ಮಿಕೊಳ್ಳಲಾಗಿತ್ತು.

೭.	ವಿಜಯನಗರ ಜಿಲ್ಲೆಯ ಹಂಪಿಯ ಐತಿಹಾಸಿಕ ವಿರೂಪಾಕ್ಷೇಶ್ವರ ದೇವಸ್ಥಾನದ ಬಳಿ ಆರಂಭಿಸಲಾದ ಲೆವೆಟೋ ಬ್ರ್ಯಾಂಡೆಡ್ ಸಾರ್ವಜನಿಕ ಶೌಚಾಲಯ ಸೌಲಭ್ಯ ಕೇಂದ್ರಕ್ಕೆ ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ಚಾಲನೆ ನೀಡಿದರು.

*******ಮುಕ್ತಾಯ********